ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 28–09–2020

# ಪತ್ರಿಕಾ ಪ್ರಕಟಣೆ

## ಆಕ್ಷೇಪಣೆ ಸಲ್ಲಿಸಲು ಅವಕಾಶ

ಬೆಂಗಳೂರು, ಸೆಪ್ಟೆಂಬರ್ 28 (ಕರ್ನಾಟಕ ವಾರ್ತೆ):

ಸೆಪ್ಟೆಂಬರ್–2020ರ ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷೆಗೆ ಸಂಬಂಧಪಟ್ಟಂತೆ ಪ್ರಥಮ ಭಾಷಾ ವಿಷಯಗಳು, ದ್ವಿತೀಯ ಭಾಷಾ ವಿಷಯಗಳು, ತೃತೀಯ ಭಾಷಾ ವಿಷಯಗಳು, ಗಣಿತ ವಿಷಯ, ಸಮಾಜ ವಿಜ್ಞಾನ ವಿಷಯ ಹಾಗು ಜೆ.ಟಿ.ಎಸ್ ವಿಷಯಗಳ ಮಾದರಿ ಉತ್ತರ ಹಾಗೂ Scheme of Evaluation ಕುರಿತು ದಿನಾಂಕ: 28.09.2020ರಂದು ಮಂಡಳಿಯ ಅಂತರ್ಜಾಲದಲ್ಲಿ (www.kseeb.kar.nic.in) ಪ್ರಕಟಿಸಲಾಗಿದೆ. ಪ್ರಕಟಿಸಿದ ಮೂರು ದಿನಗಳೊಳಗೆ ವಿದ್ಯಾರ್ಥಿಗಳು ಮಾದರಿ ಉತ್ತರ ಹಾಗೂ Scheme of Evaluation ಕುರಿತು Online ಮೂಲಕ ಆಕ್ಷೇಪಣೆ ಸಲ್ಲಿಸಲು ಅವಕಾಶ ಕಲ್ಪಿಸಿದೆ.

ಆಕ್ಷೇಪಣೆ ಸಲ್ಲಿಸುವ ವಿದ್ಯಾರ್ಥಿಯು, ಮಂಡಳಿಯ ಅಂತರ್ಜಾಲದಲ್ಲಿ ಲಾಗಿನ್ ಆಗಿ, ವಿದ್ಯಾರ್ಥಿಯು ನೋಂದಣಿ ಸಂಖ್ಯೆಯನ್ನು ಎಂಟ್ರಿ ಮಾಡುವುದು. ನಂತರ OTP (One Time Password)ಯು ವಿದ್ಯಾರ್ಥಿಯ ಮೊಬೈಲ್‌ನಲ್ಲಿ ಸ್ವೀಕೃತಿಯಾಗುತ್ತದೆ. ನಂತರ ವಿದ್ಯಾರ್ಥಿಯು ಆನ್‌ಲೈನ್‌ನಲ್ಲಿ ಆಕ್ಷೇಪಣೆಗಳನ್ನು ಸಲ್ಲಿಸಬಹುದಾಗಿದೆ. ಸಲ್ಲಿಸಿದ ಆಕ್ಷೇಪಣೆಯು 100 ಪದಗಳೊಳಗೆ ಇರುವುದು ಕಡ್ಡಾಯ. ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶ ದಿನಾಂಕ: 29.09.2020 ರಿಂದ 01.10.2020ರವರೆಗೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಿನಿಮಾಟ್ರೋಘಿ ಮತ್ತು ಸೌಂಡ್ ರೆಕಾರ್ಡಿಂಗ್ ಅಂಡ್ ಇಂಜಿನಿಯರಿಂಗ್ ಕೋರ್ಸ್‌ಗಳಿಗೆ ಪ್ರವೇಶ

ಬೆಂಗಳೂರು, ಸೆಪ್ಟೆಂಬರ್ 28 (ಕರ್ನಾಟಕ ವಾರ್ತೆ):

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಚಲನಚಿತ್ರ ಮತ್ತು ದೂರದರ್ಶನ ಸಂಸ್ಥೆಯು ಸಿನಿಮಾಟೋಗ್ರಫಿ ಮತ್ತು ಸೌಂಡ್ ರೆಕಾರ್ಡಿಂಗ್ ಅಂಡ್ ಇಂಜಿನಿಯರಿಂಗ್, ಡಿಪ್ಲೋಮಾ ಕೋರ್ಸುಗಳಿಗೆ ಪ್ರಸಕ್ತ 2020-21 ನೇ ಶೈಕ್ಷಣಿಕ ಸಾಲಿನಲ್ಲಿ ಲ್ಯಾಟರಲ್ ಎಂಟ್ರಿ ಸ್ಕೀಂ ಮುಖಾಂತರ 2ನೇ ವರ್ಷ/3ನೇ ಸೆಮಿಸ್ಟರ್ ಡಿಪ್ಲೋಮಾ ಕೋರ್ಸುಗಳೀಗೆ ದ್ವಿತೀಯ ಪಿಯುಸಿ-ವಿಜ್ಞಾನ ವಿಷಯದಲ್ಲಿ ಉತ್ತೀರ್ಣರಾಗಿರುವ ಅರ್ಹ ಅಭ್ಯರ್ಥಿಗಳಿಗೆ ಆನ್‌ಲೈ ನ್ ನಾನ್-ಇಂಟರಾಕ್ಟೀವ್ ಕೌನ್ಸ್‌ಲಿಂಗ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

ಈ ಸಂಸ್ಥೆಯ ಕೋರ್ಸುಗಳಿಗೆ ಪ್ರವೇಶಾತಿಯನ್ನು ಪಡೆಯಲು ಅಭ್ಯರ್ಥಿಯು ಖುದ್ದಾಗಿ ಸಂಸ್ಥೆಗೆ ಭೇಟಿ ನೀಡುವ ಮೂಲಕ ಅಥವಾ ಸಮೀಪವಿರುವ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಆನ್‌ಲೈನ್ ಮೂಲಕ ಅರ್ಜಿಗಳನ್ನು 06-10-2020ರ ಸಂಜೆ 5-30 ರವರೆಗೆ ಸಲ್ಲಿಸಬಹುದು.

ಹೆಚ್ಚಿನ ವಿವರಗಳಿಗಾಗಿ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ವೆಬ್‌ಸೈಟ್: https://dtetech.karnataka.gov.in/kartechnical ಮತ್ತು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್:www.cetonline.karnataka.gov.in/kea ಹಾಗೂ ದೂರವಾಣಿ:9686754592, 9844288324, 8970101477ಗಳನ್ನು ಸಂಪರ್ಕಿಸಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಂತಾಪ

ಬೆಂಗಳೂರು, ಸೆಪ್ಟೆಂಬರ್ 28 (ಕರ್ನಾಟಕ ವಾರ್ತೆ):

ಕನ್ನಡ ಹಿರಿಯ ಸಾಹಿತಿಗಳು ಮತ್ತು ವಿದ್ವಾಂಸರಾಗಿದ್ದ ಹಿ.ಚಿ. ಶಾಂತವೀರಯ್ಯ ನಿಧನರಾದುದಕ್ಕೆ ವಸತಿ ಸಚಿವ ವಿ. ಸೋಮಣ್ಣ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಕನ್ನಡ ನಿಘಂಟಿನ ಸಹ ಸಂಪದಕರೂ ಆಗಿದ್ದ ಶ್ರೀಯುತರು ಕನ್ನಡ ಸಾಹಿತ್ಯ ಚರಿತ್ರೆಯ ಸಂಪುಟಗಳೂ ಸೇರಿದಂತೆ ಹತ್ತಾರು ಗ್ರಂಥಗಳನ್ನು ಕನ್ನಡ ಸಾಹಿತ್ಯ ಲೋಕಕ್ಕೆ ನೀಡಿದ್ದಾರೆ. ಕನ್ನಡೇತರರಿಗೆ ಕನ್ನಡ ಕಲಿಸುವ ಕಾಯಕ ಮಾಡಿದ್ದಾರೆ. ಇವರ ಆತ್ಮಕ್ಕೆ ಶಾಂತಿ ಸಿಗಲಿ ಅವರ ಅಗಲಿಕೆಯಿಂದ ಉಂಟಾಗಿರುವ ದು :ಖವನ್ನು ಭರಿಸುವ ಶಕ್ತಿಯನ್ನು ಭಗವಂತನು ಅವರ ಕುಟುಮಬ ವರ್ಗಕ್ಕೆ ಮತ್ತು ಅಪಾರ ಬಂಧು-ಬಳಗಕ್ಕೆ ಕರುಣಿಸಲಿ ಎಂದು ಸಚಿವರು ಪ್ರಾರ್ಥಿಸಿದ್ದಾರೆ.

## ಸಂತಾಪ

**ಬೆಂಗಳೂರು, ಸೆಪ್ಟೆಂಬರ್ 28 (ಕರ್ನಾಟಕ ವಾರ್ತೆ):**

ಸಾಹಿತ್ಯ ಕ್ಷೇತ್ರದ ಮೇರು ಪರ್ವತಗಳಾದ ಡಾ.ಜಿ.ಎಸ್.ಆಮೂರ ಮತ್ತು ಹಿ.ಚಿ.ಶಾಂತವೀರಯ್ಯ ಅವರುಗಳ ನಿಧನ ಸಾಹಿತ್ಯ ಕ್ಷೇತ್ರಕ್ಕೆ ತುಂಬಲಾರದ ನಷ್ಟ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್.ನಾಗಾಭರಣ ಅವರು ಸಂತಾಪ ವ್ಯಕ್ತಪಡಿಸಿದ್ದಾರೆ.

ಸಾಹಿತ್ಯ ಕ್ಷೇತ್ರದ ವಿವಿಧ ಪ್ರಕಾರಗಳಲ್ಲಿ ಸಾಕಷ್ಟು ಉತ್ಕೃಷ್ಟ ಕೃತಿಗಳನ್ನು ನೀಡಿದ ಆಮೂರ ಅವರು ಇತ್ತೀಚೆಗಷ್ಟೆ ನೃಪತುಂಗ ಪ್ರಶಸ್ತಿಗೆ ಭಾಜನರಾಗಿದ್ದರು. ಅದೇ ರೀತಿ ಶಾಂತವೀರಯ್ಯ ಅವರು ಕನ್ನಡ ನಿಘಂಟು ಕ್ಷೇತ್ರದಲ್ಲಿ 3 ದಶಕಗಳಿಗೆ ಹೆಚ್ಚು ದುಡಿದಿದ್ದಾರೆ. ಹೀಗೆ ಸಾಹಿತ್ಯ ಕ್ಷೇತ್ರದಲ್ಲಿ ತಮ್ಮ ಛಾಪು ಮೂಡಿಸಿದ್ದ ಈ ಇಬ್ಬರು ಮಹನೀಯರು ಒಂದೇ ದಿನ ನಮ್ಮಗನ್ನಲಿರುವುದು ಅತ್ಯಂತ ಬೇಸರದ ಸಂಗತಿ ಎಂದು ಎಂದಿದ್ದಾರೆ.

ಈ ಇಬ್ಬರು ಮಹನೀಯರಿಗೂ ಚಿರಶಾಂತಿ ದೊರೆಯಲಿ ಎಂದು ತಮ್ಮ ಮನದಾಳದ ನಮನಗಳನ್ನು ಸಲ್ಲಿಸಿದ್ದಾರೆ.

## 15ನೇ ವಿಧಾನಸಭೆಯ 7ನೇ ಅಧಿವೇಶನದ ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ

**ಬೆಂಗಳೂರು, ಸೆಪ್ಟಂಬರ್ 28, (ಕರ್ನಾಟಕ ವಾರ್ತೆ):**

**15ನೇ ವಿಧಾನಸಭೆಯ 7 ನೇ ಅಧಿವೇಶನವನ್ನು ಸೆಪ್ಟಂಬರ್ 21 ರಿಂದ 26ರ ವರೆಗೆ ಒಟ್ಟು 6 ದಿನಗಳ ಕಾಲ ನಡೆಸಲಾಯಿತು, ಅದರಲ್ಲಿ ಒಟ್ಟು 40 ಗಂಟೆಗಳ ಕಾಲ ಕಾರ್ಯಕಲಾಪ ನಡೆಸಲಾಯಿತು ಎಂದು ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ತಿಳಿಸಿದರು.**

**15ನೇ ಅಧಿವೇಶನದ ಮುಖ್ಯಾಂಶಗಳ ಕುರಿತು ಇಂದು ವಿಧಾನಸೌಧದಲ್ಲಿ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಸಧನದಲ್ಲಿ ಇತ್ತೀಚೆಗೆ ನಿಧನ ಹೊಂದಿದ ಗಣ್ಯರುಗಳಿಗೆ, ಕೋವಿಡ್–19, ಗಡಿ ಸಂಘರ್ಷ ಹಾಗೂ ಅತಿವೃಷ್ಟಿಯಿಂದ ಮೃತರಾದವರಿಗೆ ಗೌರವಪೂರ್ವಕವಾಗಿ ಸಂತಾಪ ಸೂಚನಾ ನಿರ್ಣಯವನ್ನು ಮಂಡಿಸಲಾಯಿತು ಎಂದು ಹೇಳಿದರು.**

ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯ ಕಾರ್ಯದರ್ಶಿಯವರ ವರದಿಯನ್ನು ಮಂಡಿಸಲಾಗಿದೆ.

ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾ ಲೆಕ್ಕಪರಿಶೋಧಕರು ನೀಡಿರುವ 2018-19ನೇ ಸಾಲಿನ ಧನವಿನಿಯೋಗ ಲೆಕ್ಕಗಳು ಮತ್ತು ಹಣಕಾಸು ಲೆಕ್ಕಗಳು, ರಾಜ್ಯ ಸರ್ಕಾರದ ಹಣಕಾಸಿನ ವ್ಯವಹಾರಗಳ ಲೆಕ್ಕಪರಿಶೋಧನಾ ವರದಿ ಹಾಗೂ 74ನೇ ಸಂವಿಧಾನ ತಿದ್ದುಪಡಿ ಕಾಯ್ದೆಯ ಅನುಷ್ಠಾನದ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆ ವರದಿಯನ್ನು ಸದನದಲ್ಲಿ ಮಂಡಿಸಲಾಗಿದೆ.

ಕರ್ನಾಟಕ ವಿಧಾನಮಂಡಲ/ವಿಧಾನಸಭೆಯ ಸಮಿತಿಗಳ 6 ವರದಿಗಳು, ಜಂಟಿ ಪರಿಶೀಲನಾ ಸಮಿತಿಯ ವಿಶೇಷ ವರದಿ, 57 ಅಧಿಸೂಚನೆಗಳೂ; 19 ಅಧ್ಯಾದೇಶಗಳು: 62 ವಾಷಿಕ ವರದಿಗಳು, 69 ಲೆಕ್ಕ ಪರಿಶೋಧನಾ ವರದಿ, 1 ಅನುಷ್ಠಾನ ವರದಿ, 1 ಅನುಪಾಲನಾ ವರದಿ ಹಾಗೂ ವಿಶೇಷ ವರದಿಗಳನ್ನು ಮಂಡಿಸಲಾಗಿದೆ ಹಾಗೂ 4 ಅರ್ಜಿಗಳನ್ನು ಒಪ್ಪಿಸಲಾಗಿದೆ.

2020-21ನೆ ಸಾಲಿನ ಪೂರಕ ಅಂದಾಜುಗಳ ಮೊದಲನೇ ಕಂತಿನ ಬೇಡಿಕೆಗಳನ್ನು ಮತಕ್ಕೆ ಹಾಕಿ ಅಂಗೀಕರಿಸಲಾಗಿದೆ.

ವಿಧಾನ ಪರಿಷತ್ತಿನಿಂದ ತಿದ್ದುಪಡಿಗಳೊಂದಿಗೆ ಅಂಗೀಕಾರವಾದ ರೂಪದಲ್ಲಿರುವ 2 ವಿಧೇಯಕಗಳು, ಧನವಿನಿಯೋಗ ವಿಧೇಯಕವು ಸೇರಿದಂತೆ ಒಟ್ಟು 37 ವಿಧೇಯಕಗಳ ಪೈಕಿ 36 ವಿಧೇಯಕಗಳನ್ನು ಅಂಗೀಕರಿಸಲಾಯಿತು, 1 ವಿಧೇಯಕವನ್ನು ತಡೆಹಿಡಲಾಯಿತು.

ನಿಯಮ 60 ರಡಿಯಲ್ಲಿದ್ದ ನೀಡಿದ್ದ 3 ನಿಲುವಳಿ ಸೂಚನೆಗಳನ್ನು ಪರಿವರ್ತಿಸಲಾಗಿರುವುದನ್ನು ಸೇರಿಸಿ ಒಟ್ಟು 20 ಸೂಚನೆಗಳನ್ನು ನಿಯಮ 69ರಡಿಯಲ್ಲಿ ಸ್ವೀಕರಿಸಿದ್ದು, ಸದರಿ ಸೂಚನೆಗಳ ಪೈಕಿ 1 ಸೂಚನೆಯ ಮೇಲೆ ಚರ್ಚಿಸಲಾಗಿರುತ್ತದೆ.

ಒಟ್ಟು 3071 ಪ್ರಶ್ನೆಗಳನ್ನು ಸ್ವೀಕರಿಸಲಾಗಿದ್ದು, ಅದರಲ್ಲಿ 1109 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸಲಾಗಿದೆ. ಈ ಅಧಿವೇಶನದಲ್ಲಿ ಮಾನ್ಯ ಸದಸ್ಯರುಗಳಿಗೆ ಹಾಗೂ ಪತ್ರಿಕಾ ವೃಂದದವರಿಗೆ ಲಿಖಿತ ಮೂಲಕ ಉತ್ತರಿಸಲಾಗುವ ಪ್ರಶ್ನೆಗಳಿಗೆ ಉತ್ತರಗಳನ್ನು ಇ-ಮೇಲ್ ಮುಖಾಂತರ ಒದಗಿಸಿರುವುದು ಒಂದು ವಿಶೇಷವಾಗಿದೆ ಎಂಬುದನ್ನು ತಮ್ಮ ಗಮನಕ್ಕೆ ತರಬಯಸುತ್ತೇನೆ ಎಂದು ಹೇಳಿದರು.

ನಿಯಮ 351 ರಡಿಯಲ್ಲಿ 60 ಸೂಚನೆಗಳನ್ನು ಅಂಗೀಕರಿಸಿದ್ದು ಅದರಲ್ಲಿ 35 ಸೂಚನೆಗಳಿಗೆ ಉತ್ತರಗಳನ್ನು ಸ್ವೀಕರಿಸಲಾಗಿರುತ್ತದೆ.

ಗಮನ ಸೆಳೆಯುವ 129 ಸೂಚನೆಗಳ ಪೈಕಿ 9 ಸಲೂಚನೆಗಳನ್ನು ಚರ್ಚಿಸಲಾಗಿದೆ ಹಾಗೂ 72 ಸೂಚನೆಗಳ ಉತ್ತರಗಳನ್ನು ಸ್ವೀಕರಿಸಲಾಗಿರುತ್ತದೆ.

ವಿವಿಧ ಸ್ಥಾಯಿ ಸಮಿತಿಗಳಿಗೆ ಸದಸ್ಯರನ್ನು ನಾಮನಿರ್ದೇಶನ ಮಾಡಲು ಹಾಗೂ ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಮತ್ತು ನಡವಳಿಕೆಯ ನಿಯಮಗಳನ್ನು ಪರಿಶೀಲಿಸಿ ತಿದ್ದುಪಡಿ ತರಲು ಶಿಫಾರಸ್ಸು ಮಾಡುವುದಕ್ಕಾಗಿ ನಿಯಮಾವಳಿ ಸಮಿತಿಯನ್ನು ರಚಿಸಲು ಸಭಾಧ್ಯಕ್ಷರಿಗೆ ಅಧಿಕಾರ ನೀಡಲಾಗಿರುತ್ತದೆ.

ಮುಖ್ಯಮಂತ್ರಿಯವರ ನೇತೃತ್ವದ ಮಂತ್ರಿಮಂಡಲದ ಮೇಲೆ ವಿರೋಧ ಪಕ್ಷದ ನಾಯಕರು ಮಂಡಿಸಿದ್ದ ಅವಿಶ್ವಾಸ ನಿರ್ಣಯ ಪ್ರಸ್ತಾವ ಧ್ವನಿಮತದಿಂದ ತಿರಸ್ಕರಿಸಲ್ಪಟ್ಟಿದೆ.

ಈ ಅವಧಿಯಲ್ಲಿ ಸದನವು ಶೇಕಡ 90ಕ್ಕಿಂತ ಹೆಚ್ಚಿನ ಕಾರ್ಯಕಲಾಪಗಳನ್ನು ಪೂರ್ಣಗೊಳಿಸಿರುತ್ತದೆ ಎಂಬುದನ್ನು ತಿಳಿಸಲು ಹರ್ಷವಾಗುತ್ತದೆ.

ಕರ್ನಾಟಕ ವಿಧಾನ ಮಂಡಲದ ವತಿಯಿಂದ ಪ್ರಕಟಗೊಳ್ಳುತ್ತಿದ್ದ ತ್ರೈಮಾಸಿಕ ಶಾಸಕಾಂಗ ಪತ್ರಿಕೆಯು ಸ್ಥಗಿತಗೊಂಡಿರುವುದನ್ನು ಗಮನಿಸಿ ಜುಲೈ–2019 ರಿಂದ ಸದರಿ ಪತ್ರಿಕೆಯನ್ನು ಪ್ರಕಟಿಸಿ ಈಗಾಗಲೇ ಮಾರ್ಚ್ 2020 ಅವಧಿಯವರೆಗಿನ ಮೂರು ಸಂಚಿಕೆಗಳನ್ನು ಬಿಡುಗಡೆಗೊಳಿಸಿ ಸದಸ್ಯರುಗಳಿಗೆ ಒದಗಿಸಲಾಗಿದೆ.

15ನೇ ವಿಧಾನ ಸಭೆಯ ಸದಸ್ಯರುಗಳ ಪರಿಚಯ ಪುಸ್ತಕವನ್ನು ಪ್ರಕಟಿಸಿ ಸದಸ್ಯರುಗಳಿಗೆ ಒದಗಿಸಲು ಕ್ರಮ ಕೈಗೊಂಡಿರುವುದನ್ನು ಸದಸ್ಯರ ಗಮನಕ್ಕೆ ತರಬಯಸುತ್ತೇನೆ.

ವಿಶೇಷವಾಗಿ ಕೊರೋನಾ ವೈರಸ್ ಹಾವಳಿಯ ಸಂದರ್ಭದಲ್ಲಿ ಸದನ ನಡೆಸಲು ಸಹಕರಿಸಿದ ಸಭಾ ನಾಯಕರಾದ ಮುಖ್ಯಮಂತ್ರಿಯವರಿಗೆ, ವಿರೋಧ ಪಕ್ಷದ ನಾಯಕರಿಗೆ, ಸಚ ಇವ ಸಂಪುಟದ ಸದಸ್ಯರಿಗೆ, ಪು ಸಭಾಧ್ಯಕ್ಷರಿಗೆ, ಸರ್ಕಾರಿ ಹಾಗೂ ವಿರೋಧ ಪಕ್ಷದ ಮುಖ್ಯ ಸಚೇತಕರಿಗೆ, ಎಲ್ಲಾ ಸದಸ್ಯರುಗಳಿಗೆ, ಮಾಧ್ಯಮ ಪ್ರತಿನಿಧಿಗಳಿಗೆ, ಇಲಾಖಾ ಮುಖ್ಯಸ್ಥರು, ಅಧಿಕಾರಿ–ಸಿಬ್ಬಂದಿಯವರಿಗೆ, ವಿಧಾನಸಭೆ ಸಚಿವಾಲಯದ ಅಧಿಕಾರಿ ಸಿಬ್ಬಂದಿಯವರಿಗೆ ಕೃತಜ್ಞತೆ ಸಲ್ಲಿಸುತ್ತೇನೆ. ಕೊರೋನಾ ವೈರಸ್ ವ್ಯಾಪಕವಾಗಿ ಹರಡುತ್ತಿದರೂ, ಕೊರೋನಾ ವೈರಸ್ ಹರಡದಂತೆ ತೆಗೆದುಕೊಂಡ ಎಲ್ಲಾ ಮುನ್ನೆಚ್ಚರಿಕೆ ಕ್ರಮಗಳನ್ನು ಪಾಲಿಸಿಕೊಂಡು ಸದನಕ್ಕೆ ಹಾಜರಾಗಿ ಸದನದ

ಕಾರ್ಯಕಲಾಪಗಳು ಸುಗಮವಾಗಿ ನಡೆಯುವಂತೆ ಸಹಕರಿಸಿದ ತಮ್ಮೆಲ್ಲರಿಗೂ ಮತ್ತೊಮ್ಮೆ ಕೃತಜ್ಞತೆಯನ್ನು ಸಲ್ಲಿಸುತ್ತಿದ್ದೇನೆ. ಅಲ್ಲದೆ ಈ ಕೊರೋನಾ ವೈರಸ್ ಹಾವಳಿಗೆ ಕಡಿವಾಣ ಹಾಕಲು ನಾವೆಲ್ಲರೂ ಒಟ್ಟಾಗಿ ಪ್ರಯತ್ನಿಸೋಣ ಹಾಗೂ ಈ ದಿಸೆಯಲ್ಲಿ ತಮ್ಮೆಲ್ಲರ ಪರವಾಗಿ ನಾಡಿನ ಜನತೆಯ ಸಹಕಾರವನ್ನು ಕೋರುತ್ತೇನೆ ಎಂದು ಸಭಾಧ್ಯಕ್ಷರು ತಿಳಿಸಿದರು.